ಕರ್ನಾಟಕ ವಿಧಾನ ಪರಿಷತ್ತು

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	860
2)	ಮಾನ್ಯ ಸದಸ್ಯರ ಹೆಸರು	ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)
3)	ಉತ್ತರಿಸಬೇಕಾದ ದಿನಾಂಕ	20/09/2021
4)	ಉತ್ತರಿಸುವವರು	ಮಾನ್ಯ ಉನ್ನತ ಶಿಕ್ಷಣ, ಐಟಿ–ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು.

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡುವ ವಿಚಾರವಾಗಿ DGT, NCVT ಮತ್ತು NATIONAL COMMISSION FOR MINORITY EDUCATIONAL INSTITUTIONS ಇವರ ಪಾತ್ರಗಳೇನು; (ವಿವರ ನೀಡುವುದು)	ಕೇಂದ್ರ ಸರ್ಕಾರದ ಡಿ.ಜಿ.ಟಿ., ನವದೆಹಲಿ ರವರು ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಲ್ಲಿನ ವೃತ್ತಿ/ಘಟಕಗಳಿಗೆ ಎನ್.ಸಿ.ವಿ.ಟಿ. ಸಂಯೋಜನೆ ನೀಡುವ ಪ್ರಾಧಿಕಾರವಾಗಿರುತ್ತಾರೆ. ಆದರೆ ಡಿ.ಜಿ.ಟಿ. ರವರ ನಿಯಮಗಳಲ್ಲಿ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಪರಿಗಣಿಸಿ ಸ್ಥಾನಮಾನ ನೀಡುವ ಬಗ್ಗೆ ಯಾವುದೇ ಮಾರ್ಗಸೂಚಿಗಳಿರುವುದಿಲ್ಲ. ಶಿಕ್ಷಣ ಸಂಸ್ಥೆಯವರು ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯಾಗಿ ಘೋಷಿಸಲು ಕೋರಿ ಕೇಂದ್ರ ಸರ್ಕಾರದ National Commission for Minority Educational Institutions, New Delhi ರವರಿಗೆ ಅರ್ಜಿ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಅರ್ಹರಿದ್ದಲ್ಲಿ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯೆಂದು ಘೋಷಿಸುವ ಪ್ರಾಧಿಕಾರವಾಗಿರುತ್ತಾರೆ.
ಆ)	ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡುವ ಅಧಿಕಾರ DGT ಮತ್ತು NCVT ಗೆ ಇದೆಯೇ; ಇದ್ದಲ್ಲಿ, ದಾಖಲೆಗಳನ್ನು ಒದಗಿಸುವುದು.	ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸ್ಥಾನಮಾನ ನೀಡುವ ಅಧಿಕಾರ ಡಿ.ಜಿ.ಟಿ ಮತ್ತು ಎನ್.ಸಿ.ವಿ.ಟಿ ಗೆ ಇರುವುದಿಲ್ಲ.
ಇ)	NATIONAL COMMISSION FOR MINORITY EDUCATIONAL INSTITUTIONS ಇವರು ರಾಜ್ಯದ ಯಾವ ಯಾವ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ) ಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಿದೆ; (ಕಾಲೇಜುವಾರು ಮಾಹಿತಿ ನೀಡುವುದು)	ಲಭ್ಯವಿರುವ ಮಾಹಿತಿಯಂತೆ ಈ ಕೆಳಕಂಡ ಎರಡು ಸಂಸ್ಥೆಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಲಾಗಿದೆ. 1. ಗೌಸಿಯಾ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ಹೊಸೂರು ರಸ್ತೆ, ಬೆಂಗಳೂರು–29. 2. ಕೋಮಲಣ್ಣ ದೊಡ್ಡಣ್ಣನವರ್ ಭರತೇಶ್ ಐ.ಟಿ.ಐ, ಬಸವನ ಕುಡಚಿ, ಭರತೇಶ್ ನಗರ, ಬೆಳಗಾವಿ

--2

ಈ)	ನೀಡಿದ್ದಲ್ಲಿ, ಇಲಾಖೆಯಿಂದ ಈ ಸಂಸ್ಥೆಗಳಿಗೆ ನಿಯಮಾನುಸಾರ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ; (ವಿವರ ನೀಡುವುದು)	ಯಾವುದೇ ಸೌಲಭ್ಯಗಳನ್ನು ಕಲ್ಪಿಸಿರುವುದಿಲ್ಲ.
ಉ)	NATIONAL COMMISSION FOR MINORITY EDUCATIONAL INSTITUTIONS ರವರು ರಾಜ್ಯದ ಕೆಲವು ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ)ಗಳಿಗೆ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಿದ್ದರೂ ಅದನ್ನು ರಾಜ್ಯ ಸರ್ಕಾರವು ಮಾನ್ಯತೆ ಮಾಡದಿದ್ದಲ್ಲಿ ಇದು ಸಂವಿಧಾನದ ಅನುಚ್ಛೇದ 30ರ ಉಲ್ಲಂಘನೆಯಾಗುವುದಿಲ್ಲವೇ: ಇಂತಹ ಪ್ರಕರಣಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ (ವಿವರ ನೀಡುವುದು)	NATIONAL COMMISSION FOR MINORITY EDUCATIONAL INSTITUTIONS ರವರು ರಾಜ್ಯದ ಗೌಸಿಯಾ ಕೈಗಾರಿಕಾ ತರಬೇತಿ ಸಂಸ್ಥೆ, ಬೆಂಗಳೂರು ಹಾಗೂ ಕೋಮಲ್ಲಣ್ಣ ದೊಡ್ಡಣ್ಣನವರ ಭರತೇಶ ಕೈಗಾರಿಕಾ ತರಬೇತಿ ಸಂಸ್ಥೆ, ಬಸವನಕುಡಚಿ, ಬೆಳಗಾವಿ, ಇವರುಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಿರುತ್ತದೆ. ರಾಜ್ಯ ಸರ್ಕಾರದಿಂದ ಸದರಿ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಿಗೆ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಅಗತ್ಯ ನಿಯಮಗಳನ್ನು ರೂಪಿಸಬೇಕಿದೆ. ಅಗತ್ಯ ನಿಯಮಗಳನ್ನು ರೂಪಿಸಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಕ್ರಮಕೈಗೊಳ್ಳಲಾಗುವುದು.

ಸಂಖ್ಯೆ: ಕೌಉಜೀಇ 57 ಕೈತಪ್ರ 2021

(ಡಾ॥ ಸಿ.ಎನ್. ಅಶ್ವಥ್‌ನಾರಾಯಣ)
ಉನ್ನತ ಶಿಕ್ಷಣ, ಐಟಿ–ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.